## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯದ ಎಲ್ಲಾ ಗ್ರಾಮೀಣ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಮುಖ್ಯಮಂತ್ರಿ ಗ್ರಾಮ ವಿಕಾಸ ಯೋಜನೆಯನ್ನು 2017-18ನೇ ಸಾಲಿನಿಂದ ಅನುಷ್ಠಾನಗೊಳಿಸಲು ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:** 1. 2017-18ನೇ ಆಯವ್ಯಯ ಭಾಷಣ ಕಂಡಿಕೆ ಸಂಖ್ಯೆ:296.

2. ಸಚಿವ ಸಂಪುಟದ ಸಂಖ್ಯೆ: 343/2017, ದಿ:30.05.2017.

**ಪ್ರಸ್ತಾವನೆ:**

ಮುಖ್ಯಮಂತ್ರಿ ಗ್ರಾಮವಿಕಾಸ ಯೋಜನೆಯಡಿ ಪ್ರತಿ ಗ್ರಾಮಕ್ಕೆ ರೂ.1.00 ಕೋಟಿಗಳಂತೆ ನೀಡುವ ಅನುದಾನದ ಜೊತೆಗೆ ಮುಖ್ಯಮಂತ್ರಿಗಳ 21 ಅಂಶಗಳ ಕಾರ್ಯಕ್ರಮವನ್ನು ಒಗ್ಗೂಡಿಸಿ ಒಂದು ಸಾವಿರ ಗ್ರಾಮಗಳನ್ನು ಸರ್ವತೋಮುಖವಾಗಿ ಎರಡು ವರ್ಷಗಳಲ್ಲಿ ಅಭಿವೃದ್ಧಿ ಪಡಿಸಲು 2017-18ನೇ ಸಾಲಿನ ಮೇಲೆ ಓದಲಾದ – (1) ರಂತೆ ಆಯವ್ಯಯದಲ್ಲಿ ಪ್ರಸ್ತಾಪಿಸಿದೆ.

ಪ್ರಸ್ತುತ ಸಾಲಿನಲ್ಲಿ (2017-18) ಎಲ್ಲಾ 1000 ಗ್ರಾಮಗಳನ್ನು ಆಯ್ಕೆ ಮಾಡಿ ಮುಖ್ಯಮಂತ್ರಿಗಳ ಗ್ರಾಮವಿಕಾಸ ಯೋಜನೆಯನ್ನು ಅನುಷ್ಠಾನಗೊಳಿಸಲು ಹಾಗೂ ಇದಕ್ಕೆ 2017-18 ನೇ ಸಾಲಿನಲ್ಲಿ ಹೆಚ್ಚುವರಿಯಾಗಿ ಬೇಕಾಗುವ ಅನುದಾನವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಒಟ್ಟಾರೆ ಉಳಿತಾಯ ಹಾಗೂ ಆಂತರಿಕ ಸಂಪನ್ಮೂಲಗಳಿಂದ ಭರಿಸಬೇಕೆಂದು ಸಚಿವ ಸಂಪುಟವು ಮೇಲೆ ಓದಲಾದ-(2)ರಂತೆ ಅನುಮೋದಿಸಿರುತ್ತದೆ.

ಅದರಂತೆ ಮುಖ್ಯಮಂತ್ರಿ ಗ್ರಾಮವಿಕಾಸ ಯೋಜನೆಯಡಿ ಪ್ರತಿ ಗ್ರಾಮಕ್ಕೆ ನೀಡುವ ರೂ.1.00 ಕೋಟಿ ಅನುದಾನದ ಜೊತೆಗೆ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಮತ್ತು ಇತರೆ ಅಭಿವೃದ್ಧಿ ಯೋಜನೆಗಳ ಅನುದಾನದಲ್ಲಿ ಅನುಷ್ಠಾನಕ್ಕೆ ತರುತ್ತಿರುವ ಮುಖ್ಯಮಂತ್ರಿಗಳ 21 ಅಂಶಗಳ ಕಾರ್ಯಕ್ರಮಗಳನ್ನು ಸಹ ಮುಖ್ಯಮಂತ್ರಿ ಗ್ರಾಮವಿಕಾಸ ಯೋಜನೆಯಡಿ ಆಯ್ಕೆಯಾದ ಗ್ರಾಮಗಳಲ್ಲಿ ಅನುಷ್ಠಾನಕ್ಕೆ ತಂದು ಗ್ರಾಮಗಳನ್ನು ಸರ್ವತೋಮುಖವಾಗಿ ಅಭಿವೃದ್ಧಿಪಡಿಸಲು ಹಾಗೂ ಗ್ರಾಮಗಳ ಅಭಿವೃದ್ಧಿ ಮಾಡುವ ಅನುಷ್ಟಾನದ ಹೊಣೆಯನ್ನು ಗ್ರಾಮ ಪಂಚಾಯಿತಿಗಳಿಗೆ ವಹಿಸಲು ನಿರ್ಧರಿಸಿದೆ.

ಯೋಜನೆಯ ಉದ್ದೇಶ, ಗ್ರಾಮಗಳ ಆಯ್ಕೆ, ಕೈಗೊಳ್ಳುವ ಅಭಿವೃದ್ಧಿ ಕಾರ್ಯಕ್ರಮಗಳು, ಕಾರ್ಯಾನುಷ್ಠಾನದ ಕ್ರಮಗಳು, ಮಾರ್ಗಸೂಚಿ ಮತ್ತು ಸರ್ಕಾರಿ ಆದೇಶ / ಸುತ್ತೋಲೆಗಳಲ್ಲಿ ತಿಳಿಸಿದಂತೆ ಇರುತ್ತದೆ. ಆದ್ದರಿಂದ, ಮುಖ್ಯಮಂತ್ರಿ ಗ್ರಾಮವಿಕಾಸ ಯೋಜನೆಯನ್ನು ರಾಜ್ಯಾದ್ಯಂತ 2017-18 ನೇ ಸಾಲಿನಿಂದ ಜಾರಿಗೆ ತರಲು ಸರ್ಕಾರ ತೀರ್ಮಾನಿಸಿರುತ್ತದೆ.

ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:09:ಗ್ರಾವಿಯೋ:2017, ಬೆಂಗಳೂರು, ದಿನಾಂಕ: 20.06.2017.**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ **"ಮುಖ್ಯಮಂತ್ರಿ ಗ್ರಾಮವಿಕಾಸ ಯೋಜನೆ"** ಯಡಿ ಆಯ್ಕೆಯಾಗುವ ಪ್ರತಿ ಗ್ರಾಮಕ್ಕೆ ಗರಿಷ್ಠ ರೂ.1.00 ಕೋಟಿ ಅನುದಾನದಂತೆ ಗರಿಷ್ಟ 1000 ಗ್ರಾಮಗಳನ್ನು 2017-18ನೇ ಸಾಲಿನಲ್ಲಿ ಆಯ್ಕೆ ಮಾಡಿ ರಾಜ್ಯದ ಎಲ್ಲಾ ಜಿಲ್ಲೆಗಳ ಗ್ರಾಮೀಣ ವಿಧಾನಸಭಾ ಮತಕ್ಷೇತ್ರಗಳ ವ್ಯಾಪ್ತಿಯಲ್ಲಿ ಮುಖ್ಯಮಂತ್ರಿಗಳ ಗ್ರಾಮವಿಕಾಸ ಯೋಜನೆಯನ್ನು ಅನುಷ್ಠಾನವನ್ನು ಆರಂಭಿಸಲು ಹಾಗೂ

ಗ್ರಾಮಗಳ ಆಯ್ಕೆ, ಕೈಗೊಳ್ಳುವ ಅಭಿವೃದ್ಧಿ ಕಾರ್ಯಕ್ರಮಗಳು, ಕಾರ್ಯಾನುಷ್ಠಾನದ ಕ್ರಮಗಳು, ಮಾರ್ಗಸೂಚಿ ಮತ್ತು ಸರ್ಕಾರಿ ಆದೇಶ / ಸುತ್ತೋಲೆಗಳಲ್ಲಿ ನಿಗದಿಪಡಿಸುವಂತೆ ಮುಖ್ಯಮಂತ್ರಿ ಗ್ರಾಮವಿಕಾಸ ಯೋಜನೆಯಡಿ ಆಯ್ಕೆಯಾದ ಗ್ರಾಮಗಳನ್ನು ಅಭಿವೃದ್ಧಿ ಮಾಡುವ ಅನುಷ್ಠಾನದ ಹೊಣೆಯನ್ನು ಗ್ರಾಮ ಪಂಚಾಯಿತಿಗಳಿಗೆ ವಹಿಸಲು ಮತ್ತು ಸರ್ಕಾರವು ಅನುಮೋದಿಸುವ ಮಾರ್ಗಸೂಚಿಯಲ್ಲಿರುವಂತೆ ಅಭಿವೃದ್ಧಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಮಂಜೂರಾತಿ ನೀಡಿದೆ.

ಮುಖ್ಯಮಂತ್ರಿಗಳ ಗ್ರಾಮವಿಕಾಸ ಯೋಜನೆಗೆ 2017-18 ನೇ ಸಾಲಿನಲ್ಲಿ ರೂ.300.00 ಕೋಟಿಗಳನ್ನು ನಿಗದಿಪಡಿಸಲಾಗಿದೆ. ಪ್ರಸ್ತುತ ಸಾಲಿನಲ್ಲಿ ಯೋಜನೆಗೆ ಹೆಚ್ಚುವರಿಯಾಗಿ ಬೇಕಾಗುವ ಅನುದಾನವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಒಟ್ಟಾರೆ ಉಳಿತಾಯ ಹಾಗೂ ಆಂತರಿಕ ಸಂಪನ್ಮೂಲಗಳಿಂದ ಭರಿಸಿ ಅನುಷ್ಠಾನಕ್ಕೆ ತರುವುದು.

ಮುಖ್ಯಮಂತ್ರಿ ಗ್ರಾಮವಿಕಾಸ ಯೋಜನೆಯಡಿ ಪ್ರತಿ ಗ್ರಾಮಕ್ಕೆ ನೀಡುವ ರೂ.1.00 ಕೋಟಿ ಅನುದಾನದ ಜೊತೆಗೆ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಇತರೆ ಅಭಿವೃದ್ಧಿ ಯೋಜನೆಗಳ ಅನುದಾನದಲ್ಲಿ ಅನುಷ್ಠಾನಕ್ಕೆ ತರುತ್ತಿರುವ ಮುಖ್ಯಮಂತ್ರಿಗಳ 21 ಅಂಶಗಳ ಕಾರ್ಯಕ್ರಮಗಳನ್ನು ಸಹ ಮುಖ್ಯಮಂತ್ರಿ ಗ್ರಾಮವಿಕಾಸ ಯೋಜನೆಯಡಿ ಆಯ್ಕೆಯಾದ ಗ್ರಾಮಗಳಲ್ಲಿ ಅನುಷ್ಠಾನಕ್ಕೆ ತಂದು ಗ್ರಾಮಗಳನ್ನು ಸರ್ವತೋಮುಖವಾಗಿ ಅಭಿವೃದ್ಧಿಪಡಿಸಲು ಮಂಜೂರಾತಿ ನೀಡಿದೆ.

ಮುಖ್ಯಮಂತ್ರಿ ಗ್ರಾಮವಿಕಾಸ ಯೋಜನೆಗಾಗಿ ಈ ಕೆಳಕಂಡ ಲೆಕ್ಕ ಶೀರ್ಷಿಕೆ ಗಳಡಿ ಬಿಡುಗಡೆ ಮಾಡುವ ಅನುದಾನದಲ್ಲಿ ವೆಚ್ಚವನ್ನು ಭರಿಸುವುದು.

1. 4215-02-800-0-02-132 (ಯೋಜನೆ)- ಬಂಡವಾಳ ವೆಚ್ಚಗಳು
2. 4215-02-800-0-02-422 (ಯೋಜನೆ)- ವಿಶೇಷ ಘಟಕ ಯೋಜನೆ
3. 4215-02-800-0-02-423 (ಯೋಜನೆ)- ಗಿರಿಜನ ಉಪ ಯೋಜನೆ

ಈ ಆದೇಶವನ್ನು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಯೋಇ:14:ಜಿಯೋವಿ:2017 ದಿನಾಂಕ 28.04.2017 ಮತ್ತು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ:263:ವೆಚ್ಚ-6/2017 ದಿನಾಂಕ 26.04.2017 ರಲ್ಲಿ ನೀಡಿದ ಸಹಮತಿಗಳನ್ನಾಧರಿಸಿ ಸಚಿವ ಸಂಪುಟವು ಸಂಖ್ಯೆ 343/2017, ದಿನಾಂಕ: 30.05.2017 ರಲ್ಲಿ ನೀಡಿದ ಅನುಮೋದನೆಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಡಾ. ಬೂವನಹಳ್ಳಿ ನಾಗರಾಜು)
ನಿರ್ದೇಶಕರು
ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಯನ್ನು:**

1. ಮಹಾ ಲೇಖಪಾಲರು(ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2. ಮಹಾ ಲೇಖಪಾಲರು(ಆಡಿಟ್-1), ಕರ್ನಾಟಕ, ಬೆಂಗಳೂರು.
3. ಮಹಾ ಲೇಖಪಾಲರು(ಆಡಿಟ್-2), ಕರ್ನಾಟಕ, ಬೆಂಗಳೂರು.
4. ಮಾನ್ಯ ಮುಖ್ಯಮಂತ್ರಿಗಳ ಆಪ್ತ ಕಾರ್ಯದರ್ಶಿ, ಮುಖ್ಯಮಂತ್ರಿಗಳ ಕಾರ್ಯಾಲಯ, ವಿಧಾನಸೌಧ, ಬೆಂಗಳೂರು.

5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಆಪ್ತ ಕಾರ್ಯದರ್ಶಿ. ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
10. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಬೆಂಗಳೂರು.
11. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕೃಷಿ ಇಲಾಖೆ, ಬೆಂಗಳೂರು.
12. ಸರ್ಕಾರದ ಪ್ರಧಾನ ಕಾರ್ಯದರ್ಶಿ, ತೋಟಗಾರಿಕೆ ಇಲಾಖೆ, ಬೆಂಗಳೂರು.
13. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬೆಂಗಳೂರು.
14. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು.
15. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನಾ ಇಲಾಖೆ, ಬೆಂಗಳೂರು.
16. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಇಂಧನ ಇಲಾಖೆ, ಬೆಂಗಳೂರು.
17. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪಶು ಸಂಗೋಪನೆ ಇಲಾಖೆ, ಬೆಂಗಳೂರು.
18. ಸರ್ಕಾರದ ಪ್ರಧಾನ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ಬೆಂಗಳೂರು.
19. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
20. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯುವಜನ ಸೇವೆಗಳ ಇಲಾಖೆ. ಬೆಂಗಳೂರು.
21. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ. ಬೆಂಗಳೂರು.
22. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ. ಬೆಂಗಳೂರು.
23. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಹಕಾರ ಇಲಾಖೆ, ಬೆಂಗಳೂರು.
24. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಬೆಂಗಳೂರು.
25. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಪ್ತ ಕಾರ್ಯದರ್ಶಿ (ಸಚಿವ ಸಂಪುಟ) ವಿಧಾನಸೌದ, ಬೆಂಗಳೂರು.
26. ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
27. ಆಯುಕ್ತರು, ಗ್ರಾ.ಕು.ನೀ.&ನೈ.ಇಲಾಖೆ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು.
28. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
29. ವಿಶೇಷಾಧಿಕಾರಿಗಳು (ಜಿ.ಪಂ) ಮತ್ತು ಪದನಿಮಿತ್ತ ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಬೆಂಗಳೂರು.
30. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ. ಅ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
31. ಎಲ್ಲಾ ನಿರ್ದೇಶಕರು, ಗ್ರಾ. ಅ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
32. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
33. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಬೆಂಗಳೂರು.
34. ವ್ಯವಸ್ಥಾಪಕ ನಿರ್ದೇಶಕರು, ಕೆಆರ್‌ಐಡಿಎಲ್, ಗ್ರಾಮೀಣಾಭಿವೃದ್ಧಿ ಭವನ, ಬೆಂಗಳೂರು.
35. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಖಜಾನೆ ಇಲಾಖೆ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
36. ರಾಜ್ಯದ ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು,
37. ಅಧೀನ ಕಾರ್ಯದರ್ಶಿಗಳು (ವೆಚ್ಚ-6), ಜಿಲ್ಲಾ ಪಂಚಾಯತ್, ಆರ್ಥಿಕ ಇಲಾಖೆ, ವಿಧಾನಸೌದ, ಬೆಂಗಳೂರು.
38. ಮುಖ್ಯಸ್ಥರು, ಗಣಕಕೋಶ, ಗ್ರಾ ಮತ್ತು ಪಂ.ರಾಜ್ ಇಲಾಖೆ, ವೆಬ್‌ಸೈಟ್‌ನಲ್ಲಿ ಅಳವಡಿಸಲು
39. ಸಂಪಾದಕರು, ಕರ್ನಾಟಕ ವಿಕಾಸ, ಪತ್ರಿಕೆಯಲ್ಲಿ ಪ್ರಕಟಿಸಲು.
40. ರಕ್ಷಾ ಕಡತ/ ಹೆಚ್ಚುವರಿ ಪ್ರತಿ.